ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನ ಕುರಿತು

ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-

259 (205) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಳಿಸುವಂತೆ ಕೋರಿ ಕಳೆದ 10 ವರ್ಷಗಳಲ್ಲಿ ಎಷ್ಟು ಸರಕಾರಿ ನೌಕರರು ಮನವಿ ಸಲ್ಲಿಸಿದಾರೆ; ಅದರಲ್ಲಿ ವಿಲೀನಗೊಂಡ ಸರಕಾರಿ ನೌಕರರ ಸಂಖ್ಯೆ ಎಷ್ಟು; ಅವರು ಯಾವ ಇಲಾಖೆಯಿಂದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ವಿಲೀನಗೊಂಡಿರುತ್ತಾರೆ;

(ಆ) ವಿಲೀನಗೊಂಡ ಸದರಿ ಸರಕಾರಿ ನೌಕರರು ಪ್ರಸ್ತುತ ಯಾವ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ; ಸದರಿ ನೌಕರರು ವಿಲೀನಗೊಳ್ಳುವ ಸಂದರ್ಭದಲ್ಲಿ ಯಾವ ಹುದ್ದೆಗೆ ವಿಲೀನಗೊಂಡಿದ್ದರು;

(ಇ) ಈ ನೌಕರರು ವಿಲೀನಗೊಳಿಸುವಂತೆ ಮನವಿ ಸಲ್ಲಿಸಿದ ಎಷ್ಟು ದಿನಗಳಲ್ಲಿ ಈ ವಿಲೀನ ಪ್ರಕ್ರಿಯೆ ಪೂರ್ಣಗೊಂಡಿದೆ? (ಪ್ರಕರಣವಾರು ಹೆಸರಿನೊಂದಿಗೆ ವಿವರ ನೀಡುವುದು)